# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ: ಕೇಂದ್ರ ಕಛೇರಿ: ಬೆಂಗಳೂರು

## ಪತ್ರಿಕಾ ಪ್ರಕಟಣೆ

### ತಿರು ಓಣಂ ಹಬ್ಬದ ಪ್ರಯುಕ್ತ ಕರಾರಸಾ ನಿಗಮದಿಂದ ವಿಶೇಷ ಸಾರಿಗೆ ವ್ಯವಸ್ಥೆ

ದಿನಾಂಕ: 05.09.2025 ರಂದು ತಿರು ಓಣಂ ಹಬ್ಬದ ಪ್ರಯುಕ್ತ ಕರಾರಸಾ ನಿಗಮವು, ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ದಿನಾಂಕ: 02.09.2025 ರಿಂದ 04.09.2025 ರವರೆಗೆ ಬೆಂಗಳೂರಿನಿಂದ ಕೇರಳ ರಾಜ್ಯದ ಈ ಕೆಳಕಂಡ ಸ್ಥಳಗಳಿಗೆ ಹಾಲಿ ಕಾರ್ಯಾಚರಿಸುತ್ತಿರುವ ಸಾರಿಗೆಗಳ ಜೊತೆಗೆ 90 ಹೆಚ್ಚುವರಿ ಬಸ್ಸುಗಳ ವಿಶೇಷ ಸಾರಿಗೆ ವ್ಯವಸ್ಥೆ ಮಾಡಲಾಗಿದೆ. ನಂತರ ಕೇರಳ ರಾಜ್ಯದ ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ದಿನಾಂಕ: 07.09.2025 ರಂದು ವಿಶೇಷ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುವುದು.

- ಬೆಂಗಳೂರಿನ ಮೈಸೂರು ರಸ್ತೆ ಬಸ್ ನಿಲ್ದಾಣ ಹಾಗೂ ಶಾಂತಿನಗರ ಬಸ್ ನಿಲ್ದಾಣದಿಂದ ಕೇರಳ ರಾಜ್ಯಕ್ಕೆ ಅಂದರೆ ಕಣ್ಣೂರು, ಕೋಜಿಕೋಡ್, ಎರ್ನಾಕುಲಂ, ಪಾಲಕ್ಕಾಡ್, ತ್ರಿಶೂರ್, ಕೊಟ್ಟಾಯಂ, ತಿರುವನಂತಪುರಂ ಮುಂತಾದ ಸ್ಥಳಗಳಿಗೆ ವಿಶೇಷ ವಾಹನಗಳ ಕಾರ್ಯಾಚರಣೆ. ಪ್ರತಿಷ್ಠಿತ ಸಾರಿಗೆಗಳನ್ನು ಶಾಂತಿನಗರದಲ್ಲಿನ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ಮಾಡಲಾಗುವುದು.
- ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಸಾರಿಗೆಗಳಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.
- ಪ್ರಯಾಣಿಕರು ಬಸ್ ನಿಲ್ದಾಣಗಳಿಗೆ ತೆರಳುವ ಮುನ್ನ ಮುಂಗಡ ಕಾಯ್ದಿರಿಸಲಾಗಿರುವ ಟಿಕೇಟುಗಳ ಮೇಲೆ ನಮೂದಿಸಲಾಗಿರುವ ಬಸ್ ನಿಲ್ದಾಣ/ಪಿಕ್‌ಅಪ್ ಪಾಯಿಂಟ್‌ನ ಹೆಸರನ್ನು ಗಮನಿಸುವಂತೆ ಕೋರಲಾಗಿದೆ.
- ಇ–ಟಿಕೇಟ್ ಬುಕಿಂಗ್‌ನ್ನು www.ksrtc.karnataka.gov.in ವೆಬ್ ಸೈಟ್ ಮುಖಾಂತರ ಮಾಡಬಹುದಾಗಿದೆ.
- ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೇಟು ಕಾಯ್ದಿರಿಸಿದಲ್ಲಿ **ಶೇಕಡ 5** ರಷ್ಟು ರಿಯಾಯಿತಿ ನೀಡಲಾಗುವುದು ಹಾಗೂ ಹೋಗುವ & ಬರುವ ಪ್ರಯಾಣದ ಟಿಕೇಟ್‌ನ್ನು ಒಟ್ಟಿಗೆ ಕಾಯ್ದಿರಿಸಿದಾಗ ಬರುವ ಪ್ರಯಾಣ ದರದಲ್ಲಿ **ಶೇಕಡ 10** ರಷ್ಟು ರಿಯಾಯಿತಿ ನೀಡಲಾಗುವುದು.
- ನೆರೆ ರಾಜ್ಯಗಳಾದ ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಕೇರಳ, ಗೋವಾ, ಮಹಾರಾಷ್ಟ್ರ ಹಾಗೂ ಪುದುಚೆರಿಯಲ್ಲಿ ಇರುವ ಪ್ರಮುಖ ನಗರಗಳಲ್ಲಿ ನಿಗಮದ ಮುಂಗಡ ಆಸನಗಳನ್ನು ಕಾಯ್ದಿರಿಸುವ ಕೌಂಟರ್‌ಗಳು ಇದ್ದು, ಇವುಗಳ ಮೂಲಕ ಸಹ ಮುಂಗಡವಾಗಿ ಆಸನಗಳನ್ನು ನಿಗಮದ ಸಾರಿಗೆಗಳಿಗೆ ಕಾಯ್ದಿರಿಸಬಹುದಾಗಿದೆ.
- ಕಾರ್ಯಾಚರಣೆ ಮಾಡಲಾಗುವ ಹೆಚ್ಚುವರಿ ಸಾರಿಗೆಗಳು, ಅವುಗಳು ಹೊರಡುವ ಸ್ಥಳ ಹಾಗೂ ವೇಳಾ ವಿವರಗಳನ್ನು ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಅಂತರ್‌ಜಾಲ ವ್ಯವಸ್ಥೆಯಲ್ಲಿ ಹಾಗೂ ಕರಾರಸಾ ನಿಗಮದ ವೆಬ್‌ಸೈಟ್‌ನಲ್ಲಿ ಸಾರ್ವಜನಿಕ ಮಾಹಿತಿಗಾಗಿ ಒದಗಿಸಲಾಗಿದೆ ಹಾಗೂ ಸದರಿ ಹೆಚ್ಚುವರಿ ಸಾರಿಗೆಗಳಲ್ಲಿ ಸಂಚರಿಸುವ ಪ್ರಯಾಣಿಕರು ಕಾಯ್ದಿರಿಸುವ ಮುಂಗಡ ಚೀಟಿಗಳಲ್ಲೂ ಕೂಡ ವಾಹನ ಹೊರಡುವ ಸ್ಥಳದ ವಿವರ ನಮೂದಿಸಲಾಗಿದೆ.

ಸಹಿ/–

**ಮುಖ್ಯ ಸಂಚಾರ ವ್ಯವಸ್ಥಾಪಕರು (ಆ)**

**KARNATAKA STATE ROAD TRANSPORT CORPORATION: CENTRAL OFFICES: BANGALORE**

# PRESS NOTE

## Operation of additional buses by KSRTC during Tiru Onam Festival

In view of Tiru Onam festival on 05.09.2025, KSRTC has made arrangements for operating 90 extra buses to Kerala State as mentioned below in addition to the existing services to provide transport facility to the traveling public from 02.09.2025 to 04.09.2025. Later, special buses will be operated from various places of Kerala State to Bangalore on 07.09.2025.

- Special buses will be exclusively operated from Mysuru Road Bus Station, Bengaluru and Shanthinagar Bus Station (BMTC) to Kannur, Kozhikode, Ernakulam, Palakkad, Thrissur, Kottayam, Thiruvananthapuram and other places in Kerala state. All premier Special buses will be operated from Shanthinagar Bus Station (BMTC), Shanthinagar, Bengaluru.
- Facility is provided to book computerized reservation tickets in advance for the special buses.
- Reserved passengers are requested to note the place of boarding in their reservation ticket.
- Passengers can book tickets online by logging on to www.ksrtc.karnataka.gov.in
- A discount of **5%** on the fare will be extended, if four or more passenger's book tickets in a single ticket and a discount of **10%** is offered on the return journey ticket if onward and downward journey tickets are booked simultaneously.
- Advance Reservation tickets for the services of KSRTC can be booked through the booking counters established by KSRTC at important cities of neighbouring States i.e. Tamilnadu, Andhra Pradesh, Telangana, Kerala, Puduchery, Maharashtra and Goa States.
- The details of the special operations like place and timings of departure have been provided in the computerized advance reservation network and also in KSRTC website for the information of the traveling public.

Sd/-

**Chief Traffic Manager (opn)**